ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

27

ಇಲಾಖೆ / ವಿಷಯ : DEPARTMENT / SUBJECT: ಇತರ ರಾಜ್ಯಗಳ ಮಾಹಿತಿ - (ಮಧ್ಯಪ್ರದೇಶ)

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 3/7/2020

# ಚೌಹಾಣ್ ಸಂಪುಟಕ್ಕೆ ಸಿಂಧಿಯಾ ಪ್ರಭಾವಳಿ

ಉವಾ 3/7/20

## 28 ಸಚಿವರ ಪೈಕಿ 9 ಮಂದಿ ಸಿಂಧಿಯಾ ನಿಷ್ಠರು | ಕೈ ತೊರೆದ 14 ಮಂದಿ ಪೈಕಿ 12 ಶಾಸಕರಿಗೆ ಸ್ಥಾನ

**ಭೋಪಾಲ್:** ಮಧ್ಯಪ್ರದೇಶದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿ ಮೂರು ತಿಂಗಳ ಬಳಿಕ ಸಿಎಂ ಶಿವರಾಜ್ ಸಿಂಗ್ ಚೌಹಾಣ್ ಗುರುವಾರ ಸಂಪುಟ ವಿಸ್ತರಣೆ ಮಾಡಿದ್ದಾರೆ. ಒಟ್ಟು 28 ಮಂದಿ ಶಾಸಕರು ಸಚಿವರಾಗಿ ಪ್ರಮಾಣ ಸ್ವೀಕರಿಸಿದ್ದಾರೆ. ಈ ಪೈಕಿ ಕಾಂಗ್ರೆಸ್ ತೊರೆದು ಬಿಜೆಪಿಗೆ ಸೇರ್ಪಡೆಯಾಗಿದ್ದ 12 ಮಂದಿಗೆ ಅವಕಾಶ ಕಲ್ಪಿಸಲಾಗಿದ್ದರೆ, 16 ಮಂದಿ ಬಿಜೆಪಿಯ ಶಾಸಕರು ಸಚಿವರಾಗಿದ್ದಾರೆ.

ಮಧ್ಯಪ್ರದೇಶದ ರಾಜ್ಯಪಾಲ ಹುದ್ದೆಯ ಹೆಚ್ಚುವರಿ ಹೊಣೆ ಹೊತ್ತಿರುವ ಉತ್ತರ ಪ್ರದೇಶ ರಾಜ್ಯಪಾಲೆ ಆನಂದಿ ಬೆನ್ ಪಟೇಲ್ ರಾಜಭವನದಲ್ಲಿ ನೂತನ ಸಚಿವರಿಗೆ ಅಧಿಕಾರ ಮತ್ತು ಗೋಪ್ಯತೆಯ ಪ್ರಮಾಣ ಬೋಧಿಸಿದರು.

12 ಮಂದಿಯ ಪೈಕಿ 9 ಮಂದಿ ರಾಜ್ಯಸಭಾ ಸದಸ್ಯ ಜ್ಯೋತಿರಾದಿತ್ಯ ಸಿಂಧಿಯಾ ನಿಷ್ಠರಾಗಿದ್ದಾರೆ. ಇದಲ್ಲದೆ ಏಪ್ರಿಲ್‌ನಲ್ಲಿ ನಡೆದಿದ್ದ ಮೊದಲ ಹಂತದ ಸಂಪುಟ ವಿಸ್ತರಣೆಯಲ್ಲಿ ಇಬ್ಬರು ಸಿಂಧಿಯಾ ಬೆಂಬಲಿಗರಿಗೆ ಸಚಿವ ಸ್ಥಾನ ನೀಡಲಾಗಿತ್ತು. ಹೀಗಾಗಿ, ಚೌಹಾಣ್ ಸಂಪುಟದಲ್ಲಿ 11 ಮಂದಿ ಗ್ವಾಲಿಯರ್ ರಾಜಮನೆತನದ ಕುಡಿಯ ಬೆಂಬಲಿಗರಿಗೆ ಸ್ಥಾನ ಸಿಕ್ಕಂತಾಗಿದೆ. ಹೀಗಾಗಿ, ಮಧ್ಯಪ್ರದೇಶ ಸಂಪುಟದಲ್ಲಿ ಜ್ಯೋತಿರಾದಿತ್ಯ ಸಿಂಧಿಯಾ ಪ್ರಭಾವಳಿ ಛಾಪು ಎದ್ದು ಕಾಣುತ್ತಿದೆ.

ಕಾಂಗ್ರೆಸ್ ತೊರೆದು ಬಿಜೆಪಿಗೆ ಸೇರ್ಪಡೆಯಾಗಿರುವ 22 ಮಂದಿ ಪೈಕಿ 12 ಮಂದಿಗೆ ಸಚಿವ ಸ್ಥಾನ ಲಭಿಸಿದೆ. ಪ್ರಮಾಣ ವಚನ ಸ್ವೀಕರಿಸಿದ ಸಚಿವರ ಪೈಕಿ 20 ಮಂದಿ ಸಂಪುಟ ದರ್ಜೆ ಸಚಿವರು, ಎಂಟು ಮಂದಿ ಸಹಾಯಕ ಸಚಿವ ಸ್ಥಾನ ಪಡೆದಿದ್ದಾರೆ. ಈ ಪೈಕಿ ಆರು ಮಂದಿ ಕಮಲ್‌ನಾಥ್ ಸರ್ಕಾರದಲ್ಲಿ ಸಚಿವರಾಗಿದ್ದರು. ಬಿಜೆಪಿಯಲ್ಲಿ ಹಿರಿಯ ನಾಯಕರೂ ಸೇರಿದಂತೆ ಹೊಸ ಮುಖಗಳಿಗೂ ಅವಕಾಶ ನೀಡಲಾಗಿದೆ. ಸಂಪುಟ ವಿಸ್ತರಣೆ ಬಳಿಕ ಚೌಹಾಣ್ ಸರ್ಕಾರದಲ್ಲಿ 34 ಮಂದಿ ಸಚಿವರು ಸ್ಥಾನ ಪಡೆದಂತಾಗಿದೆ.



ಮಧ್ಯಪ್ರದೇಶದ ಹಂಗಾಮಿ ರಾಜ್ಯಪಾಲೆ ಆನಂದಿ ಬೆನ್ ಪಟೇಲ್ ರಾಜಭವನದಲ್ಲಿ ಬಿಜೆಪಿ ಶಾಸಕಿ ಯಶೋಧರ ರಾಜೇ ಸಿಂಧಿಯಾ ಅವರಿಗೆ ಸಚಿವ ಸ್ಥಾನದ ಪ್ರಮಾಣ ವಚನ ಬೋಧಿಸಿದರು. ಸಿಎಂ ಶಿವರಾಜ್ ಸಿಂಗ್ ಚೌಹಾಣ್ ಇದ್ದಾರೆ.

**ಚುನಾವಣೆಯಲ್ಲಿ ಗೆಲ್ಲಬೇಕಾಗಿದೆ:** 12 ಮಂದಿ ನೂತನ ಸಚಿವರು ಆರು ತಿಂಗಳ ಒಳಗಾಗಿ ಚುನಾವಣೆಯಲ್ಲಿ ಗೆಲ್ಲಬೇಕಾಗಿದೆ. ಈ ಪೈಕಿ ಆರು ಸಚಿವರು ಗ್ವಾಲಿಯರ್–ಚಂಬಲ್ ಪ್ರದೇಶದವರೇ ಆಗಿದ್ದಾರೆ. ಕುತೂಹಲಕಾರಿ ಅಂಶವೆಂದರೆ ಕಮಲ್‌ನಾಥ್ ನೇತೃತ್ವದ ಸರ್ಕಾರಕ್ಕೆ ಬೆಂಬಲ ವಾಪಸ್ ಪಡೆದಿದ್ದ 22 ಮಂದಿ ಶಾಸಕರ ಪೈಕಿ 16 ಸ್ಥಾನಗಳು ಈ ಪ್ರದೇಶದ್ದೇ ಆಗಿವೆ.

**ಪ್ರಮುಖರು ಯಾರು?:** ರಾಜ್ಯಸಭಾ ಸದಸ್ಯ ಜ್ಯೋತಿರಾದಿತ್ಯ ಸಿಂಧಿಯಾ ತಮ್ಮ ಸಂಬಂಧಿ ಯಶೋಧರಾ ರಾಜೇ ಸಿಂಧಿಯಾಗೆ ಸಂಪುಟ ದರ್ಜೆ ಸ್ಥಾನ ಕೊಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಿಜೆಪಿ ಶಾಸಕ ಗೋಪಾಲ ಭಾರ್ಗವ ಗುರುವಾರ ಪ್ರಮಾಣ ಸ್ವೀಕರಿಸಿದವರಲ್ಲಿ ಪ್ರಮುಖರು.